ಕರ್ನಾಟಕ ಸರ್ಕಾರ

# ಸಾರ್ವಜನಿಕ ಶಿಕ್ಷಣ ಇಲಾಖೆಯ ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು.

ಸಂಖ್ಯೆ: ಎಡಿಎಂ2(2)ಸುತ್ತೋಲೆ-2/2015-16 ದಿನಾಂಕ: 09/10/2015.

## ಸುತ್ತೋಲೆ

ವಿಷಯ: " ವಿಶ್ವ ಮಕ್ಕಳ ದಿನಾಚರಣೆ " ಯ ಪ್ರಯುಕ್ತ ರಾಜ್ಯದ ಎಲ್ಲಾ ಶಾಲೆಗಳಲ್ಲಿ ಮಕ್ಕಳ ಸಂಬಂಧಿಸಿದಂತೆ ಕಡ್ಡಾಯವಾಗಿ ಕಾರ್ಯಕ್ರಮಗಳನ್ನು ಆಯೋಜಿಸುವ ಬಗ್ಗೆ.

ಉಲ್ಲೇಖ: ಅಧ್ಯಕ್ಷರು, ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ, ಬೆಂಗಳೂರು ಇವರ ಪತ್ರ ದಿನಾಂಕ: 30/09/2015.

----------.

ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ಶಿಕ್ಷಣ ಆಯೋಗಕ್ಕೆ ಮಕ್ಕಳ ಹಕ್ಕುಗಳ ಕಾಯ್ದೆ 2005ರ ಕಲಂ 13ರನ್ವಯ ಮಕ್ಕಳ ಹಕ್ಕುಗಳ ಉಲ್ಲಂಘನೆಯ ಪ್ರಕರಣಗಳಿಗೆ ಸಂಬಂಧಿಸಿದಂತೆ, ಸಿವಿಲ್ ನ್ಯಾಯಾಲಯದ ಅಧಿಕಾರವನ್ನು ಹೊಂದಿದ್ದು, ಈ ಕೆಳಗಿನ 4 ಮಕ್ಕಳ ಹಕ್ಕುಗಳನ್ನು ರಕ್ಷಿಸಲು ಬದ್ಧವಾಗಿರುತ್ತದೆ.

1] ಬದುಕುವ ಹಕ್ಕುಗಳು:- ಪ್ರತಿ ಮಗುವಿಗೂ ಜನ್ಮ ಹೊಂದುವ, ಜೀವಿಸುವ ಉತ್ತಮ ಆರೋಗ್ಯ ಸೇವೆ, ಪೌಷ್ಠಿಕ ಆಹಾರ ಪಡೆಯುವ ಒಂದು ಹೆಸರನ್ನು ಹೊಂದಿರುವ ತಾನು ಒಂದು ದೇಶದ ಪ್ರಜೆ ಎಂದು ಗುರುತಿಸಿಕೊಳ್ಳುವ ಹಕ್ಕು.

2] ರಕ್ಷಣೆಯ ಹಕ್ಕುಗಳು: ದಬ್ಬಾಳಿಕೆ, ತೊಂದರೆ, ಕಿರುಕುಳ, ಹಿಂಸೆಗಳ ವಿರುದ್ಧ ತುರ್ತು ಸಂದರ್ಭಗಳಲ್ಲಿ ಮತ್ತು ಸಶಸ್ತ್ರ ಘರ್ಷಣೆಗಳಾದಾಗ ರಕ್ಷಣೆ ಪಡೆಯುವ ಹಕ್ಕು.

3] ವಿಕಾಸ ಹೊಂದುವ ಹಕ್ಕುಗಳು:- ಶಿಕ್ಷಣ ಶೈಶವದಲ್ಲಿ ಬೆಳೆಯಲು ಅವಕಾಶ, ಆರೋಗ್ಯ ರಕ್ಷಣೆ, ಸಾಮಾಜಿಕ ಭದ್ರತೆ, ಬಿಡುವು, ಮನೋರಂಜನೆ ಮತ್ತು ಸಾಂಸ್ಕೃತಿಕ ಚಟುವಟಿಕೆಗಳಿಗೆ ಅವಕಾಶ

4] ಭಾಗವಹಿಸುವ ಹಕ್ಕುಗಳು:- ಮಕ್ಕಳ ಅಭಿಪ್ರಾಯಗಳಿಗೆ ಮನ್ನಣೆ, ಸ್ವಾತಂತ್ರ್ಯ ಮಾಹಿತಿಯ ಲಭ್ಯತೆ, ಚಿಂತನೆಗೆ ಬುದ್ಧಿ ಬೆಳವಣಿಗೆಗೆ ಅವಕಾಶ, ಸಂಘಟಿತರಾಗುವ ಮತ್ತು ಧಾರ್ಮಿಕ ನಂಬುಗೆಯ ಹಕ್ಕುಗಳು,

ವಿಶ್ವಸಂಸ್ಥೆಯೊಂದಿಗೆ ಒಡಂಬಡಿಕೆಗೆ ಒಳಪಟ್ಟು ನವೆಂಬರ್ 20 ಅನ್ನು " ವಿಶ್ವ ಮಕ್ಕಳ ದಿನಾಚರಣೆ " ಎಂದು ಘೋಷಣೆ ಮಾಡಿದ್ದು, ಈ ಹಿನ್ನೆಲೆಯಲ್ಲಿ ಮಕ್ಕಳ ಮೇಲ್ಕಂಡ 4 ಹಕ್ಕುಗಳ ಬಗ್ಗೆ ಪ್ರತಿ ಶಾಲೆಯಲ್ಲಿಯೂ ವಿದ್ಯಾರ್ಥಿಗಳಲ್ಲಿ ಅರಿವು ಮೂಡಿಸುವ ಬಗ್ಗೆ ಭಾಷಣ, ಪ್ರಬಂಧ ಸ್ಪರ್ಧೆಯನ್ನು ಕಡ್ಡಾಯವಾಗಿ ಮಾಡಿ ಇದರಲ್ಲಿ ಪ್ರತಿ ಶಾಲೆಯ ಒಬ್ಬ ವಿಜೇತರನ್ನು ತಾಲ್ಲೂಕು ಮಟ್ಟಕ್ಕೂ ಅಲ್ಲಿಂದ ವಿಜೇತ ಒಬ್ಬರನ್ನು ಜಿಲ್ಲಾ ಮಟ್ಟಕ್ಕೂ ಕಳುಹಿಸಿಕೊಡುವುದು, ವಲಯ ಮತ್ತು ಜಿಲ್ಲಾ ಮಟ್ಟದಲ್ಲಿ ವಿಜೇತ ಸ್ಪರ್ದಿಗಳಿಗೆ ಪ್ರಥಮ, ದ್ವಿತೀಯ ಮತ್ತು ತೃತೀಯ ಸ್ಥಾನದವರಿಗೆ ಬಹುಮಾನವನ್ನು ನೀಡಲಾಗುವುದು

14/X/15

(ಕೆ.ಎಸ್.ಸತ್ಯಮೂರ್ತಿ)
ಆಯುಕ್ತರು
ಸಾರ್ವಜನಿಕ ಶಿಕ್ಷಣ ಇಲಾಖೆ

ಗೆ,

ರಾಜ್ಯದ ಎಲ್ಲಾ ಉಪನಿರ್ದೇಶಕರು(ಆಡಳಿತ) ಸಾರ್ವಜನಿಕ ಶಿಕ್ಷಣ ಇಲಾಖೆ ಅಗತ್ಯ ಕ್ರಮಕ್ಕಾಗಿ

ಪ್ರತಿ:

1. ಅಧ್ಯಕ್ಷರು ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ 4 ನೇ ಮಹಡಿ ,ಕೃಷಿ ಭವನ, ನೃಪತುಂಗ ರಸ್ತೆ, ರಾಣಿ ಚನ್ನಮ್ಮ ವೃತ್ತ ಬೆಂಗಳೂರು-02
2. ಕಛೇರಿ ಪ್ರತಿ.

SKR\\10.96.135.22\e\D\Adm2\1075-15.doc